# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 985 |
| ಸದಸ್ಯರ ಹೆಸರು | : | ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 14-03-2025 |
| ಉತ್ತರಿಸುವವರು | : | ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯವರು, ಸಹಾಯಕರು, ಅಂಗನವಾಡಿ ಮೇಲ್ವಿಚಾರಕರು, ಇತರ ಅಧಿಕಾರಿ ಸಿಬ್ಬಂದಿಗಳು ವಿವಿಧ ಬೇಡಿಕೆಗಳ ಈಡೇರಿಕೆಗೆ ಮನವಿಗಳನ್ನು ಸಲ್ಲಿಸುತ್ತಿದ್ದು ಮತ್ತು ವಿವಿಧ ರೀತಿಯಲ್ಲಿ ಪ್ರತಿಭಟನೆಯನ್ನು ಆಗಾಗ ಮಾಡುತ್ತಿದ್ದು, ಈ ಕುರಿತು ಇಲಾಖೆ ಇಲ್ಲಿಯವರೆಗೆ ಕೈಗೊಂಡ ಕ್ರಮವೇನು; ಈ ರೀತಿಯ ಸಮಸ್ಯೆಗಳ ಪರಿಹಾರಕ್ಕಾಗಿ ಯಾವ ಕ್ರಮಗಳನ್ನು ರೂಪಿಸಿದೆ; (ಬೇಡಿಕೆವಾರು ವಿವರ ನೀಡುವುದು.) | ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಬೇಡಿಕೆಗಳನ್ನು ಹಂತ-ಹಂತವಾಗಿ ಈಡೇರಿಸಲಾಗುತ್ತಿದೆ. ಈಡೇರಿಸಲಾದ ಬೇಡಿಕೆಗಳ ಪಟ್ಟಿಯನ್ನು **ಅನುಬಂಧದಲ್ಲಿ** ಒದಗಿಸಿದೆ. |
| ಆ) | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಎಷ್ಟು ಅಧಿಕಾರಿ ಸಿಬ್ಬಂದಿಗಳ ಯಾವ ಅವಧಿಯವರೆಗಿನ ಗೌರವಧನ ವೇತನ ಪಾವತಿಗೆ ಬಾಕಿಯಿದೆ; ಬಾಕಿಯಾಗಲು ಕಾರಣವೇನು; | ರಾಜ್ಯವಲಯದ ವ್ಯಾಪ್ತಿಯಲ್ಲಿ 3260 ಅಧಿಕಾರಿಗಳು/ ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದು ಸದರಿಯವರಿಗೆ ಹೆಚ್.ಆರ್.ಎಂ.ಎಸ್ ತತ್ರಾಂಶದ ಮೂಲಕ ನಿಯಮಿತವಾಗಿ ವೇತನವನ್ನು ಪಾವತಿ ಮಾಡಲಾಗುತ್ತಿದೆ.<br><br>ಕಾರ್ಯನಿರತ 124,758 ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯರ ಗೌರವಧನವನ್ನು ಫೆಬ್ರವರಿ-2025ರವರೆಗೆ ಪಾವತಿಸಲಾಗಿರುತ್ತದೆ. |
| ಇ) | ರಾಜ್ಯದ ಸರ್ಕಾರಿ ಹಾಗೂ ಖಾಸಗಿ ಶಾಲೆಗಳಲ್ಲಿ ಷರತ್ತುಗಳನ್ವಯ ಎಲ್‌ಕೆಜಿ / ಯುಕೆಜಿ (ಪೂರ್ವ ಪ್ರಾಥಮಿಕ) ಶಾಲೆಗಳನ್ನು ಪ್ರಾರಂಭಿಸುತ್ತಿದ್ದು ಇದರಿಂದಾಗಿ ಕೆಲ ಅಂಗನವಾಡಿಗಳಲ್ಲಿ ಮಕ್ಕಳ ಸಂಖ್ಯೆ ತೀರಾ ಕಡಿಮೆಯಾಗಿದ್ದು, ಕ್ರಮೇಣ ಅಂಗನವಾಡಿಗಳು ಗರ್ಭಿಣಿ, ಬಾಣಂತಿಯರಿಗೆ ಸವಲತ್ತು ನೀಡಲು ಸೀಮಿತವಾಗಿ ಪ್ರಾಮುಖ್ಯತೆ ಕಳೆದುಕೊಳ್ಳುವ ಭೀತಿಯಲ್ಲಿ ಅಂಗನವಾಡಿ ಕಾರ್ಯಕರ್ತೆಯವರು, ಸಹಾಯಕರು ಕೆಲಸ ಕಳೆದುಕೊಳ್ಳುವ ಸಂಭವವಿದೆಯೇ; | ಬೆಂಗಳೂರು ನಗರ ಜಿಲ್ಲೆಯ 250 ಅಂಗನವಾಡಿ ಕೇಂದ್ರಗಳಲ್ಲಿ ಎಲ್ ಕೆ ಜಿ / ಯು ಕೆ ಜಿ ತರಗತಿಗಳನ್ನು ಪ್ರಾಯೋಗಿಕವಾಗಿ ಪ್ರಾರಂಭಿಸಲು ದಿನಾಂಕ:27-07-2024 ರ ಆದೇಶದಲ್ಲಿ ತಾತ್ವಿಕ ಅನುಮೋದನೆ ನೀಡಲಾಗಿದ್ದು, ಅದರಂತೆ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿರುತ್ತದೆ. ಇದರಿಂದಾಗಿ ಮಕ್ಕಳ ಹಾಜರಾತಿಯು ಶೇ.20 ರಷ್ಟು ಗಣನೀಯವಾಗಿ ಹೆಚ್ಚಳವಾಗಿರುತ್ತದೆ. ಮುಂದುವರೆದು, ರಾಜ್ಯದ ಇತರೆ ಆಯ್ದ ಅಂಗನವಾಡಿ ಕೇಂದ್ರಗಳಲ್ಲಿಯೂ ಹಂತ-ಹಂತವಾಗಿ ಎಲ್ ಕೆ ಜಿ / ಯು ಕೆ ಜಿ ತರಗತಿಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ.<br><br>ಅಂಗನವಾಡಿ ಕೇಂದ್ರಗಳಲ್ಲಿ ಶಾಲಾ ಪೂರ್ವ ಶಿಕ್ಷಣದ ಜೊತೆಗೆ **ಪೋಷಣ್ ಅಭಿಯಾನ್ ಯೋಜನೆಯಡಿ** ಅಂಗನವಾಡಿ ಕೇಂದ್ರಕ್ಕೆ ದಾಖಲಾಗುವ ಪ್ರತಿಯೊಂದು ಮಗುವಿನ ಬೆಳವಣಿಗೆಯ ಹಂತದ (ತೂಕ, ಎತ್ತರ) ಮಾಹಿತಿಯನ್ನು ಪೋಷಣ್ ಟ್ರ್ಯಾಕರ್‌ನಲ್ಲಿ |

| | | |
|---|---|---|
| | | ಅಳವಡಿಸಿ, ಕುಂಠಿತ ಬೆಳವಣಿಗೆಯಲ್ಲಿರುವ ಮಕ್ಕಳನ್ನು ಗುರುತಿಸಿ ಸಕಾಲದಲ್ಲಿ ಮಗುವಿನ ತಾಯಂದಿರಿಗೆ ತಿಳುವಳಿಕೆ ನೀಡಿ ಹೆಚ್ಚಿನ ಚಿಕಿತ್ಸೆಯ ಅವಶ್ಯಕತೆ ಇದ್ದಲ್ಲಿ, NRC ಕೇಂದ್ರಕ್ಕೆ ಕಳುಹಿಸಲಾಗುತ್ತದೆ. ಸಮುದಾಯ ಆಧಾರಿತ ಚಟುವಟಿಕೆಗಳನ್ನು ಅಂಗನವಾಡಿ ಕೇಂದ್ರಗಳಲ್ಲಿ ಆಯೋಜಿಸಲಾಗುತ್ತದೆ. ಸ್ತನ್ಯ ಪಾನ ಹಾಗೂ ಪೌಷ್ಟಿಕ ಆಹಾರ ಸಪ್ತಾಹ, ಪೋಷಣ್ ಮಾಹ ಆಚರಣೆಯ ಮೂಲಕ ಸಮುದಾಯದಲ್ಲಿ ಪೌಷ್ಟಿಕತೆ ಕುರಿತು ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ.<br>**ಮಾತೃಪೂರ್ಣ ಯೋಜನೆಯಡಿ** ಅಂಗನವಾಡಿ ಕೇಂದ್ರಕ್ಕೆ ದಾಖಲಾದ ಎಲ್ಲಾ ಗರ್ಭಿಣಿ ಮತ್ತು ಬಾಣಂತಿಯರಿಗೆ ಪೌಷ್ಠಿಕಾಂಶಯುಕ್ತ ಬಿಸಿಯೂಟವನ್ನು ಒದಗಿಸಿ ಹೆರಿಗೆ ಸಮಯದಲ್ಲಿ ಗರ್ಭಿಣಿ ಹಾಗೂ ಶಿಶು ಮರಣ ಸಂಖ್ಯಾ ಪ್ರಮಾಣವನ್ನು ಮತ್ತು ಕಡಿಮೆ ತೂಕದ ಮಕ್ಕಳ ಜನನ ನಿಯಂತ್ರಿಸುವುದು, ರಕ್ತ ಹೀನತೆ ಕಡಿಮೆಗೊಳಿಸಿ ಕಬ್ಬಿಣಾಂಶ ಹಾಗೂ ಕ್ಯಾಲ್ಸಿಯಂ ಮಾತ್ರ ಸೇವನೆಗೆ ಬೆಂಬಲ ಹಾಗೂ ಪ್ರತಿ ತಿಂಗಳು ಗರ್ಭಿಣಿಯರ ತೂಕವನ್ನು ಪರಿಶೀಲಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ.<br>ಇದಲ್ಲದೆ, ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಚುಚ್ಚು ಮದ್ದು, ಆರೋಗ್ಯ ತಪಾಸಣೆ ಹಾಗೂ ಮಾಹಿತಿ ಸೇವೆಗಳನ್ನು ನೀಡುತ್ತಿರುವುದರಿಂದ ಅಂಗನವಾಡಿ ಕೇಂದ್ರಗಳು ಸಮುದಾಯದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸಿವೆ. |
| ಈ) | ಈ ಹಿನ್ನಲೆಯಲ್ಲಿ ರಾಜ್ಯದ ಅಂಗನವಾಡಿ ವ್ಯವಸ್ಥೆಯನ್ನು ಬಹು ಇಲಾಖಾ ಮಾಹಿತಿ ಕೇಂದ್ರವಾಗಿ ಅಭಿವೃದ್ಧಿಪಡಿಸುವ ಬಗ್ಗೆ ಇಲಾಖೆ ಯೋಚಿಸಿದೆಯೇ; ಅಂಗನವಾಡಿ ವ್ಯವಸ್ಥೆಯನ್ನು ಉಳಿಸುವ ಮತ್ತು ಸದೃಢಗೊಳಿಸುವ ಬಗ್ಗೆ ಇತರೆ ಯಾವ ಯೋಚನೆ ಸರ್ಕಾರದ ಮುಂದಿದೆ? (ವಿವರ ನೀಡುವುದು) | ರಾಜ್ಯದ ಅಂಗನವಾಡಿ ಕೇಂದ್ರಗಳ ಸೇವೆಗಳನ್ನು, RDPR, RWS, Health, NAREGA ಹಾಗೂ ಇತರೆ ಇಲಾಖೆಗಳ ಸಮನ್ವಯದೊಂದಿಗೆ ನಿರ್ವಹಿಸಲಾಗುತ್ತಿದೆ.<br>ಬೆಂಗಳೂರು ನಗರ ಜಿಲ್ಲೆಯ 250 ಅಂಗನವಾಡಿ ಕೇಂದ್ರಗಳಲ್ಲಿ ಎಲ್ ಕೆ ಜಿ / ಯು ಕೆ ಜಿ ತರಗತಿಗಳನ್ನು ಪ್ರಾಯೋಗಿಕವಾಗಿ ಪ್ರಾರಂಭಿಸಲು ದಿನಾಂಕ:27-07-2024 ರ ಆದೇಶದಲ್ಲಿ ತಾತ್ವಿಕ ಅನುಮೋದನೆ ನೀಡಲಾಗಿದ್ದು, ಅದರಂತೆ ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿರುತ್ತದೆ. ಇದರಿಂದಾಗಿ ಮಕ್ಕಳ ಹಾಜರಾತಿಯು ಶೇ.20 ರಷ್ಟು ಗಣನೀಯವಾಗಿ ಹೆಚ್ಚಳವಾಗಿರುತ್ತದೆ. ಮುಂದುವರೆದು, ರಾಜ್ಯದ ಇತರೆ ಆಯ್ದ ಅಂಗನವಾಡಿ ಕೇಂದ್ರಗಳಲ್ಲಿಯೂ ಹಂತ-ಹಂತವಾಗಿ ಎಲ್.ಕೆ.ಜಿ / ಯು.ಕೆ.ಜಿ ತರಗತಿಗಳನ್ನು ಪ್ರಾರಂಭಿಸಲು ಕ್ರಮ ವಹಿಸಲಾಗುತ್ತಿದೆ. |

**ಸಂಖ್ಯೆ:ಮಮಇ 83 ಐಸಿಡಿ 2025**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
ವಿಕಲಚೇತನರ ಹಾಗೂ ಹಿರಿಯ ನಾಗರಿಕರ
ಸಬಲೀಕರಣ ಸಚಿವರು.

## ಅನುಬಂಧ

## 2023-24 ಮತ್ತು 2024-25ನೇ ಸಾಲಿನಲ್ಲಿ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಪ್ರಮುಖ ಬೇಡಿಕೆಗಳು ಹಾಗೂ ಬೇಡಿಕೆಗಳನ್ನು ಈಡೇರಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮದ ವಿವರ.

| ಕ್ರ. ಸಂ. | ಬೇಡಿಕೆಗಳು | ತೆಗೆದುಕೊಂಡ ಕ್ರಮ |
|---|---|---|
| 1 | ಹಳೆಯ ಮಾರ್ಗಸೂಚಿಯಂತೆ SSLC ಪಾಸಾದ ಸಹಾಯಕಿ ಮತ್ತು ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ಮುಂಬಡ್ತಿ ನೀಡಬೇಕು. | ಸದರಿ ಬೇಡಿಕೆಯಂತೆ ರಾಜ್ಯ ಸರ್ಕಾರವು ದಿನಾಂಕ: 31/01/2023 ರಂದು ತಿದ್ದುಪಡಿ ಆದೇಶವನ್ನು ಹೊರಡಿಸಿದೆ. |
| 2 | ಅಂಗನವಾಡಿ ಕೇಂದ್ರಗಳ ವೇಳಾಪಟ್ಟಿ ಬದಲಾಗಬೇಕು. | ಅಂಗನವಾಡಿ ಕೇಂದ್ರಗಳ ಅವಧಿಯು ಬೆಳಿಗ್ಗೆ 9.30 ರಿಂದ ಸಂಜೆ 4.00 ಗಂಟೆಯವರೆಗೆ ಇರುತ್ತದೆ, ಇದರಲ್ಲಿ ಸರ್ಕಾರದ ಆದೇಶ ದಿನಾಂಕ: 30.01.2023ರ ಪ್ರಕಾರ ಶಾಲಾಪೂರ್ವ ಶಿಕ್ಷಣವನ್ನು ಬೆಳಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 1.00 ಗಂಟೆಯವರೆಗೆ ನಿಗದಿಪಡಿಸಿದ್ದು, ಸಾರ್ವಜನಿಕರು ಮಧ್ಯಾಹ್ನ 2.00 ಗಂಟೆಯ ನಂತರ ಮಾತ್ರ ಅಂಗನವಡಿ ಕೇಂದ್ರಗಳಿಗೆ ಭೇಟಿ ನೀಡಲು ಸೂಚಿಸಲಾಗಿರುತ್ತದೆ. |
| 3 | ಬೆಂಗಳೂರು ನಗರ ಜಿಲ್ಲೆಯಲ್ಲಿ ಅಂಗನವಾಡಿಗಳಲ್ಲಿ ಸಿಬ್ಬಂದಿ ಕೊರತೆ ಇದ್ದು ಆಫ್ಲೈನ್ ಮೂಲಕ ನೇಮಕಾತಿ ಮಾಡಲು ಕೂಡಲೇ ಅನುಮತಿ ನೀಡಬೇಕು | ನಿರ್ದೇಶನಾಲಯದ ಪತ್ರ ಸಂಖ್ಯೆ:ಮಮಅಇ:ಐಸಿಡಿ:ANG-01/2023-24 ದಿನಾಂಕ:02.02.2024 ಮತ್ತು 17.02.2024ಗಳಲ್ಲಿ ಆಡಳಿತಾತ್ಮಕ ಹಿತದೃಷ್ಟಿಯಿಂದ ಬೆಂಗಳೂರು ನಗರ ಜಿಲ್ಲೆಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಹುದ್ದೆಗಳ ಭರ್ತಿಗಾಗಿ ಆಫ್ ಲೈನ್ ಮುಖಾಂತರ ಅಧಿಸೂಚನೆ ಹೊರಡಿಸಿ, ಭೌತಿಕವಾಗಿ ಪ್ರಾರಂಭಿಸಿದ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ವಿಶೇಷ ಪ್ರಕರಣವೆಂದು ಪರಿಗಣಿಸಿ, ಒಂದು ಬಾರಿಗೆ ಮಾತ್ರ ಅನ್ವಯವಾಗುವಂತೆ ಅನುಮತಿ ನೀಡಲಾಗಿದೆ. |
| 4 | ಗ್ರಾಚ್ಯುಟಿ ಪಾವತಿಸಲು ಕೂಡಲೇ ಸರ್ಕಾರ ನಿರ್ದೇಶನ ನೀಡಬೇಕು. | ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರು ಹಾಗೂ ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ ಉಪಧನ(Gratuity) ಪಾವತಿಸುವ ಕುರಿತು ಆದೇಶ ದಿನಾಂಕ: 04/02/2023 ರಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.<br><br>ಈ ಕುರಿತಂತೆ ದಿನಾಂಕ:21.06.2024 ರಂದು ಪ್ರತ್ಯೇಕ ಮಾರ್ಗಸೂಚಿ ಹೊರಡಿಸಲಾಗಿರುತ್ತದೆ ಹಾಗೂ ದಿನಾಂಕ:17.08.2024 ರಂದು ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಪೂರ್ಣ ಸೇವಾವಧಿ ಪರಿಗಣಿಸಿ ಗ್ರಾಚ್ಯುಟಿ ನೀಡಲು ಆದೇಶಿಸಲಾಗಿರುತ್ತದೆ. ಪ್ರಸ್ತುತ ಅನುದಾನ ಬಿಡುಗಡೆಗಾಗಿ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ. |

| | | |
|---|---|---|
| 5 | ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರಿಗೆ ಏಕಕಾಲದಲ್ಲಿ ವಯೋನಿವೃತ್ತಿ ನೀಡುವುದು. | ದಿನಾಂಕ:21.05.2024 ರ ಸರ್ಕಾರದ ಆದೇಶದಲ್ಲಿ ಮೇ ಮಾಹೆಯಿಂದ ಅಕ್ಟೋಬರ್ ಮಾಹೆಯಲ್ಲಿ ನಿವೃತ್ತಿ ಹೊಂದಲಿರುವ ಅಂಕಾಕ/ಅಂ.ಸ ರವರನ್ನು ಅಕ್ಟೋಬರ್ ಮಾಹೆಯಲ್ಲಿ ನಿವೃತ್ತಿಗೊಳಿಸಲು ಹಾಗೂ ನವೆಂಬರ್ ಮಾಹೆಯಿಂದ ಏಪ್ರಿಲ್ ಮಾಹೆಯಲ್ಲಿ ನಿವೃತ್ತಿ ಹೊಂದುವವರನ್ನು ಏಪ್ರಿಲ್ ಮಾಹೆಯಲ್ಲಿ ನಿವೃತ್ತಿಗೊಳಿಸಲು ಆದೇಶಿಸಲಾಗಿದೆ. |
| 6 | ಯೋಜನೇತರ ಕೆಲಸಗಳಾದ ಸ್ತ್ರೀಶಕ್ತಿ, ಭಾಗ್ಯಲಕ್ಷ್ಮಿ, ಮಾತೃವಂದನಾ ಮತ್ತು ಚುನಾವಣೆ ಕರ್ತವ್ಯ, ಮುಂತಾದವುಗಳನ್ನು ಅಂಗನವಾಡಿ ಕಾರ್ಯಕರ್ತೆ / ಸಹಾಯಕಿ ನಿರ್ವಹಿಸುವುದನ್ನು ನಿಲ್ಲಿಸಬೇಕು. | ಈಗಾಗಲೇ ಜಿಲ್ಲಾಧಿಕಾರಿಗಳಿಗೆ ಯೋಜನೇತರ ಕೆಲಸಗಳನ್ನು ವಹಿಸಬಾರದೆಂದು ತಿಳಿಸಿ ದಿನಾಂಕ-20.10.2018 ಮತ್ತು 17.03.2022 ರಂದು ಪತ್ರ ಬರೆಯಲಾಗಿದೆ.<br><br>ಮುಂದುವರೆದು ದಿನಾಂಕ: 23.02.2023ರಂದು ಸಮಗ್ರ ಶಿಶು ಅಭಿವೃದ್ಧಿ ಯೋಜನೇತರ ಕೆಲಸಗಳಿಗೆ ನಿಯೋಜಿಸದಿರುವ ಕುರಿತು ಸಹ ಜಿಲ್ಲಾಧಿಕಾರಿಗಳಿಗೆ ಅ.ಸ. ಪತ್ರ ಹೊರಡಿಸಲಾಗಿದೆ. |
| 7 | ಅಂಗನವಾಡಿ ಕೇಂದ್ರಗಳಿಗೆ ಈಗ ನೀಡುತ್ತಿರುವ 12 ಲಕ್ಷ ಅನುದಾನವನ್ನು 30 ಲಕ್ಷಕ್ಕೇರಿಸಿ ಅಂಗನವಾಡಿ ಕಟ್ಟಡಗಳನ್ನು ವ್ಯವಸ್ಥಿತಗೊಳಿಸಬೇಕು. | ಈಗಾಗಲೇ ಘಟಕ ವೆಚ್ಚವನ್ನು ರೂ.20.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. |
| 8 | ಮಿನಿ ಅಂಗನವಾಡಿ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಬೇಕು ಅಥವಾ ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೆ , ಕಾರ್ಯಕರ್ತೆಯರಷ್ಟೇ ಗೌರವಧನ ನೀಡಬೇಕು | ಸರ್ಕಾರದ ಆದೇಶದ ಸಂಖ್ಯೆ: ಮಮಇ 241 ಐಸಿಡಿ 2022 ದಿನಾಂಕ:23.03.2023 ರ ಆದೇಶದಲ್ಲಿ 1002 ಮಿನಿ ಅಂಗನವಾಡಿ ಕೇಂದ್ರಗಳನ್ನು ಮುಖ್ಯ ಅಂಗನವಾಡಿ ಕೇಂದ್ರಗಳಾಗಿ ಉನ್ನತೀಕರಿಸಲಾಗಿದೆ. ಉಳಿದ ಅಂಗನವಾಡಿ ಕೇಂದ್ರಗಳನ್ನು ಉನ್ನತೀಕರಿಸುವ ಹಂತ ಪ್ರಗತಿಯಲ್ಲಿದೆ. |
| 9 | ಅನುಕಂಪದ ಆಧಾರದ ನೇಮಕಾತಿ ಸಂಬಂಧ ಬೇಡಿಕೆ | ಸರ್ಕಾರದ ಆದೇಶ ಸಂಖ್ಯೆ: ಮಮಇ 190 ಐಸಿಡಿ 2021 ದಿನಾಂಕ: 05.03.2022 ರಲ್ಲಿ ಸೂಚಿಸಿರುವಂತೆ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರು ಮೃತಪಟ್ಟಲ್ಲಿ ಅನುಕಂಪದ ಆಧಾರದಲ್ಲಿ ಮಗಳು / ಸೊಸೆ ಇಬ್ಬರಲ್ಲಿ ಒಬ್ಬರಿಗೆ ನೇಮಕ ಮಾಡಲು ಅವಕಾಶ ಕಲ್ಪಿಸಲಾಗಿದೆ. |
| 10 | ಅಂಗನವಾಡಿ ಕೇಂದ್ರಗಳಲ್ಲಿಯೇ LKG/UKG ಪ್ರಾರಂಭಿಸಬೇಕು. | ರಾಜ್ಯದಲ್ಲಿ ಪ್ರಸ್ತುತ 69919 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ಕೇಂದ್ರಗಳಲ್ಲಿ ಪಿ.ಯು.ಸಿ, ಪದವಿ ಹಾಗೂ ಸ್ನಾತಕೋತ್ತರ ಪದವಿಗಳನ್ನು ಹೊಂದಿದ ಅಂಗನವಾಡಿ ಕಾರ್ಯಕರ್ತೆಯರು ಕಾರ್ಯನಿರ್ವಹಿಸುವ ಕೇಂದ್ರಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ ಸ್ವಂತ ಕಟ್ಟಡದಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳಲ್ಲಿ LKG & UKG ತರಗತಿಗಳನ್ನು ಪ್ರಾಯೋಗಿಕವಾಗಿ ಮೊದಲನೇ ಹಂತದಲ್ಲಿ ಬೆಂಗಳೂರು ನಗರ ಜಿಲ್ಲೆಯ 250 ಅಂಗನವಾಡಿ ಕೇಂದ್ರಗಳಲ್ಲಿ ಪ್ರಾರಂಭಿಸಲು ದಿ:20/7/2024ರ ಆದೇಶದಲ್ಲಿ ತಾತ್ವಿಕ ಅನುಮೋದನೆ ನೀಡಲಾಗಿರುತ್ತದೆ. |

| | | |
|---|---|---|
| 11. | ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ನೇಮಕಾತಿಯಲ್ಲಿ ಈ ಹಿಂದಿನ ಆದೇಶದಲ್ಲಿದ್ದಂತೆ ವಿಧವೆಯರಿಗೆ ಆದ್ಯತೆ ನೀಡಬೇಕು. | ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ಪರಿಷ್ಕೃತ ಆಯ್ಕೆ ಮಾರ್ಗಸೂಚಿ ದಿನಾಂಕ:03.12.2022 ರ ಆದೇಶದಲ್ಲಿ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ವಿಧವೆಯರನ್ನು ಆಯ್ಕೆ ಮಾಡುವಾಗ +5 ಬೋನಸ್ ಅಂಕಗಳನ್ನು ನಿಗಧಿಪಡಿಸಲಾಗಿತ್ತು. ಪ್ರಸ್ತುತ ದಿನಾಂಕ:18.11.2024 ರಂದು ಮಾರ್ಪಾಡು ಆದೇಶವನ್ನು ಹೊರಡಿಸಲಾಗಿದ್ದು, ಸದರಿ ಆದೇಶದಲ್ಲಿ ಅಂಗನವಾಡಿ ಕಾರ್ಯಕರ್ತೆ/ಸಹಾಯಕಿ ಹುದ್ದೆಗೆ ನೇಮಕಾತಿ ಮಾಡುವಾಗ ವಿಧವೆಯರಿಗೆ ಆದ್ಯತೆ ನೀಡಲಾಗಿರುತ್ತದೆ. |
| 12 | ಅಂಗನವಾಡಿ ಸಹಾಯಕಿ/ಮಿನಿ ಕಾರ್ಯಕರ್ತೆ ಹುದ್ದೆಯಿಂದ ಕಾರ್ಯಕರ್ತೆ ಹುದ್ದೆಗೆ ಮುಂಬಡ್ತಿ ನೀಡುವಾಗ ಅದೇ ಗ್ರಾಮದ 03 ಕಿ.ಮೀ ವ್ಯಾಪ್ತಿ ಎಂಬುದನ್ನು ಕೈಬಿಡಬೇಕು. | ದಿನಾಂಕ:16.08.2024ರ ಮಾರ್ಪಾಡು ಆದೇಶದಲ್ಲಿ ಮಿನಿ ಅಂಗನವಾಡಿ ಕಾರ್ಯಕರ್ತೆ/ ಸಹಾಯಕಿಯಿಂದ ಕಾರ್ಯಕರ್ತೆ ಹುದ್ದೆಗೆ ಮುಂಬಡ್ತಿಗೆ ಪರಿಗಣಿಸುವಾಗ ತಮ್ಮ ಗ್ರಾಮ/ ನಗರ ಪ್ರದೇಶದಲ್ಲಿ ಮೂರು ಕಿ.ಮೀ. ವ್ಯಾಪ್ತಿಯಲ್ಲಿ ವಾಸವಿರುವವರನ್ನು ಪರಿಗಣಿಸುವಂತೆ ಆದೇಶಿಸಲಾಗಿದೆ. |